## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಚುನಾವಣಾ ಆಯೋಗದ ಕಛೇರಿಯನ್ನು ಸ್ಥಳಾಂತರಗೊಳ್ಳುತ್ತಿರುವ ಶ್ರೀ ಕೃಷ್ಣದೇವರಾಯ ಎಜುಕೇಷನಲ್ ಟ್ರಸ್ಟ್‌ನ ಕಟ್ಟಡದ ಒಳ ವಿನ್ಯಾಸ/ ನವೀಕರಣ ಕಾಮಗಾರಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಇವರ ಪತ್ರ ಸಂಖ್ಯೆ:ರಾಚುಆ.07.ಎಸ್‌ಯುಪಿ 2021, ದಿನಾಂಕ: 27-09-2021.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪಂರಾ 601 ಜಿಪಸ 2020, ದಿನಾಂಕ:26-11-2021.
3. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ:ರಾಚುಆ 07 ಎಸ್‌ಯುಪಿ 2021, ದಿನಾಂಕ: 15-11-2021.
4. ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಇವರ ಪತ್ರ ಸಂಖ್ಯೆ:ರಾಚುಆ.07.ಎಸ್‌ಯುಪಿ, ದಿನಾಂಕ: 13-12-2021.

**ಪ್ರಸ್ತಾವನೆ:**

ರಾಜ್ಯ ಚುನಾವಣಾ ಆಯೋಗದ ಕಛೇರಿಯನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಕಟ್ಟಡದಿಂದ ಶ್ರೀ ಕೃಷ್ಣದೇವರಾಯ ಎಜುಕೇಷನಲ್ ಟ್ರಸ್ಟ್, ನಂ.16, ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-560080 ಇಲ್ಲಿನ ಎರಡು ಮಹಡಿಗಳ 8989 ಚದರ ಅಡಿಗಳ ಸ್ಥಳಾವಕಾಶಕ್ಕೆ ಸ್ಥಳಾಂತರಿಸುವ ಸಂಬಂಧ, ಸ್ಥಳಾಂತರಗೊಳ್ಳುವ ಕಟ್ಟಡದಲ್ಲಿನ ಒಳವಿನ್ಯಾಸ/ನವೀಕರಣ ಕಾರ್ಯವನ್ನು ಕೈಗೊಳ್ಳುವ ಸಲುವಾಗಿ ಆಯವ್ಯಯ ಲೆಕ್ಕ ಶೀರ್ಷಿಕೆ 2515-00-101-0-11-(059)ರ ಅಡಿಯಲ್ಲಿ ರೂ.2.50 ಕೋಟಿ (ರೂ.ಎರಡು ಕೋಟಿ ಐವತ್ತು ಲಕ್ಷ ಮಾತ್ರ) ಗಳನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (1)ರ ದಿನಾಂಕ: 27-09-2021ರ ಪತ್ರದಲ್ಲಿ ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಇವರು ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲು ಸ್ಥಳಾಂತರಗೊಳ್ಳುವ ಕಟ್ಟಡದಲ್ಲಿನ ಒಳವಿನ್ಯಾಸ/ನವೀಕರಣ ಕಾರ್ಯವನ್ನು ಕೈಗೊಳ್ಳಲು ಅನುಷ್ಠಾನ ಸಂಸ್ಥೆಯಿಂದ ಅಂದಾಜು ಪಟ್ಟಿಯನ್ನು ಪಡೆದು ತಾಂತ್ರಿಕವಾಗಿ ಪರಿಶೀಲಿಸಿ, ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿಗಾಗಿ ಸರ್ಕಾರದ ಅನುಮೋದನೆಗಾಗಿ ಕಳುಹಿಸಿಕೊಡುವಂತೆ ಮೇಲೆ ಓದಲಾದ(2)ರ ಪತ್ರದಲ್ಲಿ ರಾಜ್ಯ ಚುನಾವಣಾ ಆಯೋಗವನ್ನು ಕೋರಲಾಗಿತ್ತು.

ರಾಜ್ಯ ಚುನಾವಣಾ ಆಯೋಗದ ಕಛೇರಿಯು ಸ್ಥಳಾಂತರಗೊಳ್ಳುತ್ತಿರುವ ಶ್ರೀ ಕೃಷ್ಣದೇವರಾಯ ಎಜುಕೇಷನಲ್ ಟ್ರಸ್ಟ್ ಕಟ್ಟಡದ 2 ಮತ್ತು 3ನೇ ಮಹಡಿಯ ಒಳ ವಿನ್ಯಾಸ / ನವೀಕರಣ ಕಾರ್ಯವನ್ನು ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನಕ್ಕೊಳಪಡುವ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆಯ ಮುಖಾಂತರ ಅನುಷ್ಠಾನಗೊಳಿಸುತ್ತಿದ್ದು, ಸದರಿ

ನಿಗಮದ ತಾಂತ್ರಿಕ ವಿಭಾಗವಾದ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ. ಮತ್ತು ಎಸ್ಟೇಟ್ ಅಧಿಕಾರಿ / ಯೋಜನಾ ಕಾರ್ಯಪಾಲಕ ಅಭಿಯಂತರರು, ಸಿಂಗಸಂದ್ರ ವಾಣಿಜ್ಯ ಸಂಕೀರ್ಣ ವಿಭಾಗ, ಬೆಂಗಳೂರು ರವರು ತಾಂತ್ರಿಕವಾಗಿ ಪರಿಶೀಲಿಸಿ ನೀಡಿರುವ ಕಾಮಗಾರಿಯ ಅಂದಾಜು ಪಟ್ಟಿಯಂತೆ ರೂ. 2,19,60,000/- (ಎರಡು ಕೋಟಿ ಹತ್ತೊಂಭತ್ತು ಲಕ್ಷದ ಅರವತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ವೆಚ್ಚದಲ್ಲಿ ನಿರ್ವಹಿಸಲು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆಗೆ ಮೇಲೆ ಓದಲಾದ (3)ರ ಆಯೋಗದ ಆದೇಶದನ್ವಯ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುವುದಾಗಿ ತಿಳಿಸಿ, ಸದರಿ ಕಾಮಗಾರಿಗಾಗಿ ರೂ. 2.50 ಕೋಟಿ ಅನುದಾನವನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (4)ರ ದಿನಾಂಕ:13-12-2021ರ ಪತ್ರದಲ್ಲಿ ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸ್ಥಳಾಂತರಗೊಳ್ಳುವ ರಾಜ್ಯ ಚುನಾವಣಾ ಆಯೋಗದ ಕಟ್ಟಡದಲ್ಲಿನ ಒಳವಿನ್ಯಾಸ / ನವೀಕರಣ ಕಾರ್ಯವನ್ನು ಕೈಗೊಳ್ಳುವ ಸಲುವಾಗಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆಯು ತಾಂತ್ರಿಕವಾಗಿ ಪರಿಶೀಲಿಸಿ ನೀಡಿರುವ ಕಾಮಗಾರಿಯ ಅಂದಾಜು ಪಟ್ಟಿಯಂತೆ ರೂ. 2,19,60,000/- (ಎರಡು ಕೋಟಿ ಹತ್ತೊಂಭತ್ತು ಲಕ್ಷದ ಅರವತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ವೆಚ್ಚದಲ್ಲಿ ನಿರ್ವಹಿಸಲು ಈಗಾಗಲೇ ಆಯೋಗವು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುವುದರಿಂದ, ಉಲ್ಲೇಖಿತ ಲೆಕ್ಕ ಶೀರ್ಷಿಕೆ 2515-00-101-0-11-(059) ರ ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ರೂ.2.00 ಕೋಟಿ (ಎರಡು ಕೋಟಿ ರೂಪಾಯಿಗಳು ಮಾತ್ರ) ಗಳನ್ನು ಬಿಡುಗಡೆ ಮಾಡುವ ಹಾಗೂ ಪ್ರಸಕ್ತ ಸಾಲಿನಲ್ಲಿ ಯಾವುದೇ ಮಾರ್ಗಪಲ್ಲಟ ಮಾಡದೇ ವೆಚ್ಚವನ್ನು ನಿಯಮಾನುಸಾರ ಭರಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಅನುಮತಿ ನೀಡಲು ಸರ್ಕಾರ ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 601 ಜಿಪಸ 2020, ಬೆಂಗಳೂರು, ದಿನಾಂಕ:11-01-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೃಷ್ಣದೇವರಾಯ ಎಜುಕೇಷನಲ್ ಟ್ರಸ್ಟ್ ನಂ.16, ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-560080 ಇಲ್ಲಿಗೆ ಸ್ಥಳಾಂತರಗೊಳ್ಳುವ ರಾಜ್ಯ ಚುನಾವಣಾ ಆಯೋಗದ ಕಟ್ಟಡದಲ್ಲಿನ ಒಳವಿನ್ಯಾಸ / ನವೀಕರಣ ಕಾರ್ಯವನ್ನು ಕೈಗೊಳ್ಳುವ ಸಲುವಾಗಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆಯು ತಾಂತ್ರಿಕವಾಗಿ ಪರಿಶೀಲಿಸಿ ನೀಡಿರುವ ಕಾಮಗಾರಿಯ ಅಂದಾಜು ಪಟ್ಟಿಯಂತೆ ರೂ. 2,19,60,000/- (ಎರಡು ಕೋಟಿ ಹತ್ತೊಂಭತ್ತು ಲಕ್ಷದ ಅರವತ್ತು ಸಾವಿರ ರೂಪಾಯಿಗಳು ಮಾತ್ರ)ಗಳ ವೆಚ್ಚದಲ್ಲಿ ನಿರ್ವಹಿಸಲು ಈಗಾಗಲೇ ಆಯೋಗವು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುವುದರಿಂದ, ಉಲ್ಲೇಖಿತ ಲೆಕ್ಕ ಶೀರ್ಷಿಕೆ 2515-00-101-0-11-(059) ರ ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ರೂ.2.00 ಕೋಟಿ (ಎರಡು ಕೋಟಿ ರೂಪಾಯಿ ಮಾತ್ರ) ಗಳನ್ನು ಬಿಡುಗಡೆ ಮಾಡುವ ಹಾಗೂ ಪ್ರಸಕ್ತ ಸಾಲಿನಲ್ಲಿ ಯಾವುದೇ ಮಾರ್ಗಪಲ್ಲಟ ಮಾಡದೇ ವೆಚ್ಚವನ್ನು ಭರಿಸಲು ಆದೇಶಿಸಿದೆ.

ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಅಭಿಪ್ರಾಯ/ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Chetna 11/1/22
(ಚೇತನ. ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ, ನಂ-8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.
5. ಉಪಕಾರ್ಯದರ್ಶಿ, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನಸೌಧ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ಕಟ್ಟಡ, ನಂ.8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-560052.
8. ಕಾರ್ಯದರ್ಶಿ, ಶ್ರೀ ಕೃಷ್ಣದೇವರಾಯ ಎಜುಕೇಷನಲ್ ಟ್ರಸ್ಟ್, ನಂ.16, ಬಳ್ಳಾರಿ ರಸ್ತೆ, ಸದಾಶಿವನಗರ, ಬೆಂಗಳೂರು-80 .
9. ಮೇಲ್ವಿಚಾರಕರು, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
10. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ.